ಕರ್ನಾಟಕ ಸರ್ಕಾರ
ಸಾರ್ವಜನಿಕ ಶಿಕ್ಷಣ ಇಲಾಖೆ
ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು –1

ಸಂಖ್ಯೆ: ಜಂ.ನಿ(ಆ) ಖಾಪೂ.ಸೇ. ಘೋ:01/2021-22, ದಿನಾಂಕ: 27.01.2023

**ಸೂಚನಾ ಪತ್ರ**

ವಿಷಯ: - ಸಾರ್ವಜನಿಕ ಶಿಕ್ಷಣ ಇಲಾಖೆಯ "ಸಿ"ವೃಂದದ ಬೋಧಕೇತರ ನೌಕರರ ಕಾರ್ಯಕ್ಷಮತೆ ಪರೀಕ್ಷೆಯನ್ನು ರದ್ದುಪಡಿಸುವ ಕುರಿತು.

ಉಲ್ಲೇಖ:- 1.ಸರ್ಕಾರದ ಪತ್ರ ಸಂಖ್ಯೆ:ಇಪಿ 59 ಎಸ್.ಟಿ.ಬಿ 2023 ದಿನಾಂಕ:25.01.2023.
2.ಈ ಕಛೇರಿ ಜ್ಞಾಪನ ಸಂಖ್ಯೆ:ಜಂ.ನಿ(ಆ) ಖಾಪೂ.ಸೇ. ಘೋ:01/2021- 22 ದಿನಾಂಕ:19-12-2022

*****

ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ "ಸಿ" ವೃಂದದ ಬೋಧಕೇತರ (ಲಿಪಿಕ) ನೌಕರರಲ್ಲಿ ಕಾರ್ಯಕ್ಷಮತೆ ಹಾಗೂ ವಿಷಯ ಪರಿಣತಿ ಹೆಚ್ಚಿಸುವ ಉದ್ದೇಶದಿಂದ ತರಬೇತಿಯನ್ನು ನೀಡಿ ದಿನಾಂಕ:28-01-2023 ರಂದು ಕಾರ್ಯಕ್ಷಮತೆ ಪರೀಕ್ಷೆಯನ್ನು ಹಮ್ಮಿಕೊಳ್ಳಲಾಗಿತ್ತು.

ಆದರೆ ಹಲವು ಸಿಬ್ಬಂದಿಗಳು ಮತ್ತು ಅದರಲ್ಲೂ ಮುಖ್ಯವಾಗಿ ಹಿರಿಯ ಸಿಬ್ಬಂದಿಗಳು ಇಂತಹ ಪರೀಕ್ಷೆಗಳಿಂದ ತಮ್ಮ ಮನೋಬಲ ಕುಗ್ಗುತ್ತದೆ ಎಂದು ಆತಂಕ ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ, ದಿನಾಂಕ:28-01-2023 ರಂದು ಹಮ್ಮಿಕೊಳ್ಳಲಾಗಿರುವ ಪರೀಕ್ಷೆಯನ್ನು ರದ್ದುಪಡಿಸಲು ಉಲ್ಲೇಖ-01ರ ಸರ್ಕಾರದ ಪತ್ರದಲ್ಲಿ ನಿರ್ದೇಶಿಸಿರುತ್ತದೆ.

ಪ್ರಯುಕ್ತ ದಿನಾಂಕ: 28.01.2023 ರಂದು ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ಷಮತೆ ವಿಷಯ ಪರಿಣತಿ ಪರೀಕ್ಷೆಯನ್ನು ರದ್ದುಪಡಿಸಿದೆ. ಈ ಬಗ್ಗೆ ಮುಂದಿನ ಕ್ರಮಗಳನ್ನು ತಿಳಿಸಲಾಗುವುದು.

[ಮಾನ್ಯ ಆಯುಕ್ತರ ಆದೇಶದ ಮೇರೆಗೆ]

ಡಾ. ರೂಪಶ್ರೀ.ಎಸ್ ಕೆ.ಎ.ಎಸ್.,
ಜಂಟಿ ನಿರ್ದೇಶಕರು (ಆಡಳಿತ)

**ಇವರಿಗೆ:**

1. ಸಂಬಂಧಪಟ್ಟ ಎಲ್ಲಾ ಸಿಬ್ಬಂದಿಗಳಿಗೆ (ಆಯಾ ಕಛೇರಿ ಮುಖ್ಯಸ್ಥರ ಮುಖಾಂತರ)

**ಪ್ರತಿಯನ್ನು:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು ರವರಿಗೆ ಗೌರವಗಳೊಂದಿಗೆ. ಮಾಹಿತಿಗಾಗಿ.
2. ಅಪರ ಆಯುಕ್ತರು, ಸಾ.ಶಿ.ಇ, ಧಾರವಾಡ, ಕಲಬುರಗಿ ರವರಿಗೆ
3. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರುಗಳಿಗೆ.
4. ನಿರ್ದೇಶಕರು/ವ್ಯವಸ್ಥಾಪಕ ನಿರ್ದೇಶಕರು, ಪ್ರೌಢಶಿಕ್ಷಣ, ಪ್ರಾಥಮಿಕ ಶಿಕ್ಷಣ, ಮೈನಾರಿಟಿ, ಡಿ.ಎಸ್.ಇ.ಆರ್.ಟಿ., ಕೆ.ಎಸ್.ಇ.ಎ.ಬಿ., ಎಸ್.ಎಸ್.ಕೆ., ಕೆ.ಟಿ.ಬಿ.ಎಸ್.
5. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) (ಅಭಿವೃದ್ಧಿ) ಇವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ
6. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸಂಬಂಧಪಟ್ಟ ಉಪನಿರ್ದೇಶಕರ ಮುಖಾಂತರ.
7. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ, ಇವರಿಗೆ. ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
8. ಕಛೇರಿ ಪ್ರತಿ.